# ಗುರು-ಶಿಷ್ಯರ ಬಾಂಧವ್ಯಕ್ಕೆ ಸಾಕ್ಷಿಯಾದ ಗುರುವಂದನೆ ಹಾಗೂ ಸ್ನೇಹ ಸಮ್ಮೇಳನ

## 25 ವರ್ಷಗಳ ಬಳಿಕ ಒಂದಾದ ಸಹಪಾಠಿಗಳು ಶಾಲಾ ದಿನಗಳ ನೆನಪುಗಳನ್ನು ಮೆಲುಕು ಹಾಕಿ, ಶಿಕ್ಷಕರಿಗೆ ಆತ್ಮೀಯ ಸನ್ಮಾನ ಸಲ್ಲಿಸಿದರು



**ಆಳಂದ:** ಶಿಕ್ಷಣವು ಪ್ರತಿಯೊಬ್ಬರ ಬದುಕನ್ನು ರೂಪಿಸುವ ಅತ್ಯಂತ ಶಕ್ತಿಶಾಲಿ ಸಾಧನವಾಗಿದ್ದು, ಒಬ್ಬ ವ್ಯಕ್ತಿಯ ಭವಿಷ್ಯವನ್ನು ಬದಲಾಯಿಸುವ ಸಾಮರ್ಥ್ಯವನ್ನು ಹೊಂದಿದೆ. ಜೀವನದಲ್ಲಿ ಯಶಸ್ಸು ಸಾಧಿಸಲು ಶಿಕ್ಷಣದ ಜೊತೆಗೆ ಉತ್ತಮ ಶಿಕ್ಷಕರ ಮಾರ್ಗದರ್ಶನ ಅತ್ಯಗತ್ಯ. ಗುರುವಿಲ್ಲದ ಜ್ಞಾನ ಎಂದಿಗೂ ಪರಿಪೂರ್ಣವಾಗುವುದಿಲ್ಲ. ಶಿಕ್ಷಕರು ವಿದ್ಯಾರ್ಥಿಗಳ ಜೀವನದ ಶಿಲ್ಪಿಗಳಾಗಿದ್ದು, ಅವರ ವ್ಯಕ್ತಿತ್ವ ರೂಪಿಸುವಲ್ಲಿ ಮಹತ್ವದ ಪಾತ್ರ ವಹಿಸುತ್ತಾರೆ ಎಂದು ಧಂಗಾಪುರ ಸರ್ಕಾರಿ ಪ್ರೌಢಶಾಲೆಯ ಮುಖ್ಯಶಿಕ್ಷಕಿ ಸ್ನೇಹಲತಾ ನಾಡಗೌಡ ಅಭಿಪ್ರಾಯಪಟ್ಟರು.

ಆಳಂದದ ಖಾಸಗಿ ಹೋಟೆಲ್‌ನಲ್ಲಿ ಧಂಗಾಪುರ ಸರ್ಕಾರಿ ಪ್ರೌಢಶಾಲೆಯ 2000-01ನೇ ಸಾಲಿನ ಹಳೇ ವಿದ್ಯಾರ್ಥಿಗಳಿಂದ ಆಯೋಜಿಸಿದ್ದ ರಜತ ಮಹೋತ್ಸವ, ಗುರುವಂದನೆ ಹಾಗೂ ಸ್ನೇಹ ಸಮ್ಮೇಳನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಶಿಕ್ಷಕರಿಗೆ ಗೌರವ ಸಲ್ಲಿಸುವುದು ಎಂದರೆ ಕೇವಲ ವ್ಯಕ್ತಿಯೊಬ್ಬರಿಗೆ ಗೌರವ ನೀಡುವುದಲ್ಲ, ಜ್ಞಾನಕ್ಕೆ ಗೌರವ ಸಲ್ಲಿಸಿದಂತೆಯೇ ಎಂದು ಅವರು ಹೇಳಿದರು. ಜೀವನದಲ್ಲಿ ಸಾಧನೆ ಮಾಡಿರುವ ಪ್ರತಿಯೊಬ್ಬ ವ್ಯಕ್ತಿಯ ಹಿಂದೆ ಒಬ್ಬ ಶಿಕ್ಷಕರ ಪರಿಶ್ರಮ ಮತ್ತು ಮಾರ್ಗದರ್ಶನ ಇರುತ್ತದೆ. ಆದ್ದರಿಂದ ಶಿಕ್ಷಕರನ್ನು ಸದಾ ಸ್ಮರಿಸಿ ಗೌರವಿಸುವ ಸಂಸ್ಕೃತಿ ಬೆಳೆಸಿಕೊಳ್ಳಬೇಕು ಎಂದು ಕರೆ ನೀಡಿದರು.

"ಗುರು ಎಂದರೆ ಕೇವಲ ಪಾಠ ಮಾಡುವ ವ್ಯಕ್ತಿಯಲ್ಲ. ಅವರು ವಿದ್ಯಾರ್ಥಿಗಳ ಜೀವನಕ್ಕೆ ದಿಕ್ಕು ತೋರಿಸುವ ದಾರಿದೀಪ. ಒಂದು ಮರವು ತಾನು ಬಿಸಿಲಿನಲ್ಲಿ ನಿಂತು ಇತರರಿಗೆ ನೆರಳು ನೀಡುವಂತೆ, ಶಿಕ್ಷಕರು ತಮ್ಮ ಜೀವನವನ್ನೇ ವಿದ್ಯಾರ್ಥಿಗಳ ಭವಿಷ್ಯಕ್ಕಾಗಿ ಮೀಸಲಿಟ್ಟು ಅವರ ಯಶಸ್ಸಿಗೆ ಅಡಿಪಾಯ ಹಾಕುತ್ತಾರೆ. ಅಂತಹ ಶಿಕ್ಷಕರನ್ನು ಗೌರವಿಸುವುದು ಪ್ರತಿಯೊಬ್ಬ ವಿದ್ಯಾರ್ಥಿಯ ಕರ್ತವ್ಯವಾಗಿದೆ," ಎಂದು ಅವರು ಹೇಳಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಶಿಕ್ಷಕ ಸಿರಾಜುದ್ದಿನ್ ಮುಡಬಿ, ಶಿಕ್ಷಕ ವೃತ್ತಿಯ ಮಹತ್ವವನ್ನು ವಿವರಿಸಿದರು.

"ಒಳ್ಳೆಯ ಉಡುಪು ಧರಿಸಿದರೆ ಮಾತ್ರ ಯಾರೂ ಉತ್ತಮ ಶಿಕ್ಷಕರಾಗುವುದಿಲ್ಲ. ನಿಜವಾದ ಶಿಕ್ಷಕ ವಿದ್ಯಾರ್ಥಿಯ ಮನಸ್ಥಿತಿ, ಸಾಮರ್ಥ್ಯ ಮತ್ತು ಜ್ಞಾನದ ಮಟ್ಟವನ್ನು ಅರ್ಥಮಾಡಿಕೊಳ್ಳಬೇಕು. ಪ್ರತಿಯೊಬ್ಬ ವಿದ್ಯಾರ್ಥಿಯಲ್ಲೂ ವಿಭಿನ್ನ ಪ್ರತಿಭೆ ಇರುತ್ತದೆ. ಅದನ್ನು ಗುರುತಿಸಿ ಬೆಳೆಸುವುದು ಶಿಕ್ಷಕರ ಜವಾಬ್ದಾರಿ. ವಿದ್ಯಾರ್ಥಿ ತಪ್ಪು ದಾರಿಯಲ್ಲಿ ಸಾಗುತ್ತಿದ್ದರೆ ಸಮಯಕ್ಕೆ ಸರಿಯಾಗಿ ತಿದ್ದಬೇಕು. ಉತ್ತಮ ಕೆಲಸ ಮಾಡಿದಾಗ ಬೆನ್ನುತಟ್ಟಿ ಪ್ರೋತ್ಸಾಹಿಸಬೇಕು. ವಿದ್ಯಾರ್ಥಿಯಲ್ಲಿರುವ ಪ್ರತಿಭೆಯನ್ನು ಹೊರತೆಗೆದು ಸಮಾಜಕ್ಕೆ ಒಳ್ಳೆಯ ವ್ಯಕ್ತಿಯನ್ನಾಗಿ ರೂಪಿಸಿದಾಗ ಮಾತ್ರ ಶಿಕ್ಷಕ ವೃತ್ತಿಗೆ ನಿಜವಾದ ಅರ್ಥ ಸಿಗುತ್ತದೆ," ಎಂದು ಹೇಳಿದರು.

ಶಾಲಾ ದಿನಗಳ ನೆನಪುಗಳನ್ನು ಹಂಚಿಕೊಂಡ ಹಳೇ ವಿದ್ಯಾರ್ಥಿಗಳು, ತಮ್ಮ ಜೀವನದಲ್ಲಿ ಶಿಕ್ಷಕರ ಮಾರ್ಗದರ್ಶನದ ಮಹತ್ವವನ್ನು ಸ್ಮರಿಸಿದರು. ಹಲವು ವರ್ಷಗಳ ಬಳಿಕ ಒಂದೇ ವೇದಿಕೆಯಲ್ಲಿ ಸೇರಿದ್ದ ಹಳೇ ವಿದ್ಯಾರ್ಥಿಗಳು ತಮ್ಮ ಸಹಪಾಠಿಗಳು ಹಾಗೂ ಶಿಕ್ಷಕರೊಂದಿಗೆ ಆತ್ಮೀಯವಾಗಿ ಸಮಯ ಕಳೆಯುತ್ತಾ ಹಳೆಯ ನೆನಪುಗಳನ್ನು ಮೆಲುಕು ಹಾಕಿದರು. ಗುರುವಂದನೆ ಸಲ್ಲಿಸುವ ಮೂಲಕ ತಮ್ಮ ಬದುಕಿನ ಯಶಸ್ಸಿಗೆ ಕಾರಣರಾದ ಶಿಕ್ಷಕರಿಗೆ ಕೃತಜ್ಞತೆ ಅರ್ಪಿಸಿದರು.

ಈ ಸಂದರ್ಭದಲ್ಲಿ ಶಿಕ್ಷಕರನ್ನು ಸನ್ಮಾನಿಸಿ, ಹೂಗುಚ್ಛ ಹಾಗೂ ಸ್ಮರಣಿಕೆ ನೀಡಿ ಗೌರವಿಸಲಾಯಿತು. ವಿದ್ಯಾರ್ಥಿಗಳು ಮತ್ತು ಶಿಕ್ಷಕರ ನಡುವಿನ ಬಾಂಧವ್ಯವನ್ನು ಮತ್ತಷ್ಟು ಗಟ್ಟಿಗೊಳಿಸುವ ನಿಟ್ಟಿನಲ್ಲಿ ಆಯೋಜಿಸಿದ್ದ ಈ ಸ್ನೇಹ ಸಮ್ಮೇಳನವು ಆತ್ಮೀಯ ವಾತಾವರಣದಲ್ಲಿ ನಡೆಯಿತು.

ಕಾರ್ಯಕ್ರಮದಲ್ಲಿ ಸಿದ್ದರಾಮಪ್ಪ ಮುನ್ನಹಳ್ಳಿ, ಎಸ್.ಕೆ. ಕಂಟಿ, ಸುರೇಶ ಕುಲಕರ್ಣಿ, ದೇವಿಂದ್ರಪ್ಪ, ಬಸಣ್ಣ, ಶಕುಂತಲಾ, ಜಯಶ್ರೀ ಸೇರಿದಂತೆ ಹಲವರು ಮಾತನಾಡಿ, ಶಿಕ್ಷಣದ ಮಹತ್ವ, ಶಿಕ್ಷಕರ ಪಾತ್ರ ಹಾಗೂ ಹಳೇ ವಿದ್ಯಾರ್ಥಿಗಳ ಸಂಘಟನೆಯ ಅಗತ್ಯತೆ ಕುರಿತು ತಮ್ಮ ಅಭಿಪ್ರಾಯಗಳನ್ನು ಹಂಚಿಕೊಂಡರು.

ಈ ಸಂದರ್ಭದಲ್ಲಿ ಗುರುಶಿವಲಿಂಗ ಪಾಟೀಲ್, ಶಿವಲಿಂಗ ಶೇಲ್ಕರ್, ದೇವಿಂದ್ರ ಮೇಲ್ಕೇರಿ, ಅನಿಲಕುಮಾರ ನಾಟಿಕರ್ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

ಹಳೇ ವಿದ್ಯಾರ್ಥಿಗಳಾದ ಸತೀಶ ಧಂಗಾಪುರ, ರಾಮಚಂದ್ರ ಸುತಾರ, ರವೀಂದ್ರ ಕಣ್ಣಿ, ಗಂಗಾಬಾಯಿ ಪಾಟೀಲ್, ಬಾಬುರಾವ ಕಣ್ಣಿ, ಮಲ್ಲಿಕಾರ್ಜುನ ಗುಂಡುಗುರ್ಕಿ, ವಿಮಲಾ ದರಪಳೆ, ದನ್ನಬಾಯಿ ಗಾಯಕವಾಡ, ವಿದ್ಯಾವತಿ ಸಕ್ಕರಗಿ, ಸಂತೋಷಿ ಪಾಟೀಲ್ ಸೇರಿದಂತೆ ಅನೇಕರು ಕಾರ್ಯಕ್ರಮದಲ್ಲಿ ಭಾಗವಹಿಸಿ ತಮ್ಮ ಶಾಲಾ ದಿನಗಳ ಸ್ಮರಣೀಯ ಕ್ಷಣಗಳನ್ನು ಹಂಚಿಕೊಂಡರು.

ರಜತ ಮಹೋತ್ಸವ, ಗುರುವಂದನೆ ಹಾಗೂ ಸ್ನೇಹ ಸಮ್ಮೇಳನ ಕಾರ್ಯಕ್ರಮವು ಭಾವನಾತ್ಮಕ ಕ್ಷಣಗಳಿಗೆ ಸಾಕ್ಷಿಯಾಗಿದ್ದು, ಹಲವು ವರ್ಷಗಳ ಬಳಿಕ ಒಂದಾದ ಶಿಕ್ಷಕರು ಹಾಗೂ ಹಳೇ ವಿದ್ಯಾರ್ಥಿಗಳ ಆತ್ಮೀಯ ಭೇಟಿ ಎಲ್ಲರ ಮನಸ್ಸಿನಲ್ಲಿ ಅಚ್ಚಳಿಯದ ನೆನಪಾಗಿ ಉಳಿಯಿತು. ಕಾರ್ಯಕ್ರಮದ ಅಂಗವಾಗಿ ಹಳೇ ವಿದ್ಯಾರ್ಥಿಗಳು ತಮ್ಮ ಶಾಲಾ ಜೀವನದ ಸಿಹಿ-ಕಹಿ ನೆನಪುಗಳನ್ನು ಪರಸ್ಪರ ಹಂಚಿಕೊಂಡರು. ಹಲವು ವರ್ಷಗಳ ಬಳಿಕ ಒಂದೇ ವೇದಿಕೆಯಲ್ಲಿ ಭೇಟಿಯಾದ ಸಹಪಾಠಿಗಳು ತಮ್ಮ ಬಾಲ್ಯದ ಅನುಭವಗಳು, ಶಿಕ್ಷಕರ ಮಾರ್ಗದರ್ಶನ, ಶಾಲೆಯಲ್ಲಿನ ಸಾಂಸ್ಕೃತಿಕ ಹಾಗೂ ಕ್ರೀಡಾ ಚಟುವಟಿಕೆಗಳನ್ನು ನೆನಪಿಸಿಕೊಂಡು ಸಂತಸ ವ್ಯಕ್ತಪಡಿಸಿದರು. ಈ ಪುನರ್ಮಿಲನ ಕಾರ್ಯಕ್ರಮವು ಎಲ್ಲರಲ್ಲೂ ಆತ್ಮೀಯತೆ ಮತ್ತು ಭಾವನಾತ್ಮಕ ಕ್ಷಣಗಳನ್ನು ಮೂಡಿಸಿತು.

ಇದೇ ಸಂದರ್ಭದಲ್ಲಿ ಸಮಾಜದಲ್ಲಿ ಶಿಕ್ಷಣದ ಗುಣಮಟ್ಟವನ್ನು ಮತ್ತಷ್ಟು ಹೆಚ್ಚಿಸುವ ನಿಟ್ಟಿನಲ್ಲಿ ಹಳೇ ವಿದ್ಯಾರ್ಥಿಗಳು ತಮ್ಮ ಶಾಲೆಯ ಅಭಿವೃದ್ಧಿಗೆ ನಿರಂತರ ಸಹಕಾರ ನೀಡುವ ಸಂಕಲ್ಪ ವ್ಯಕ್ತಪಡಿಸಿದರು. ಶಾಲೆಗೆ ಅಗತ್ಯವಿರುವ ಮೂಲಸೌಕರ್ಯ, ಶೈಕ್ಷಣಿಕ ಚಟುವಟಿಕೆಗಳು ಹಾಗೂ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ನೀಡುವಂತಹ ಕಾರ್ಯಗಳಲ್ಲಿ ಎಲ್ಲರೂ ಕೈಜೋಡಿಸುವುದಾಗಿ ತಿಳಿಸಿದರು. ಮುಂದಿನ ದಿನಗಳಲ್ಲಿಯೂ ಇದೇ ರೀತಿಯ ಸ್ನೇಹ ಸಮ್ಮೇಳನಗಳನ್ನು ಆಯೋಜಿಸಿ ಶಿಕ್ಷಕರು ಹಾಗೂ ವಿದ್ಯಾರ್ಥಿಗಳ ಬಾಂಧವ್ಯವನ್ನು ಮತ್ತಷ್ಟು ಗಟ್ಟಿಗೊಳಿಸಲು ನಿರ್ಧರಿಸಲಾಯಿತು.

ಕಾರ್ಯಕ್ರಮದ ಕೊನೆಯಲ್ಲಿ ಹಳೇ ವಿದ್ಯಾರ್ಥಿಗಳಿಂದ ಶಿಕ್ಷಕರಿಗೆ ಆತ್ಮೀಯ ಸನ್ಮಾನ ನೆರವೇರಿಸಲಾಯಿತು. ನೆನಪಿನ ಕಾಣಿಕೆಗಳನ್ನು ನೀಡಿ ಗೌರವ ಸಲ್ಲಿಸಿದ ಬಳಿಕ, ಎಲ್ಲರೂ ಒಟ್ಟಾಗಿ ಗುಂಪು ಛಾಯಾಚಿತ್ರಗಳನ್ನು ತೆಗೆಸಿಕೊಂಡು ಸ್ಮರಣೀಯ ಕ್ಷಣಗಳನ್ನು ದಾಖಲಿಸಿಕೊಂಡರು. ನಂತರ ಸಾಂಸ್ಕೃತಿಕ ಕಾರ್ಯಕ್ರಮಗಳು ಹಾಗೂ ಸಹಭೋಜನದೊಂದಿಗೆ ರಜತ ಮಹೋತ್ಸವ, ಗುರುವಂದನೆ ಮತ್ತು ಸ್ನೇಹ ಸಮ್ಮೇಳನ ಯಶಸ್ವಿಯಾಗಿ ಸಂಪನ್ನಗೊಂಡಿತು.

## 'ದಿಲ್‌ದಾರ್' ಸಿನಿಮಾದ ಫಸ್ಟ್ ಲುಕ್ ಟೀಸರ್ ಬಿಡುಗಡೆ



ಖ್ಯಾತ ನಿರ್ಮಾಪಕ ಕೆ. ಮಂಜು ಅವರ ಪುತ್ರ ಶ್ರೇಯಸ್ ಮಂಜು ಅವರು ತಮ್ಮದೇ ರೀತಿಯಲ್ಲಿ ಗುರುತಿಸಿಕೊಳ್ಳುತ್ತಿದ್ದಾರೆ. 'ಪಡ್ಡೆಹುಲಿ' ಸಿನಿಮಾ ಮೂಲಕ ಹೀರೋ ಆಗಿ ಕನ್ನಡ ಚಿತ್ರರಂಗಕ್ಕೆ ಎಂಟ್ರಿ ನೀಡಿದ ಅವರು ಪ್ರತಿ ಸಿನಿಮಾದಲ್ಲಿ ಬೇರೆ ಬೇರೆ ರೀತಿಯ ಪಾತ್ರಗಳನ್ನು ಪ್ರಯತ್ನಿಸುತ್ತಿದ್ದಾರೆ. ಈಗ ಶ್ರೇಯಸ್ ಮಂಜು ಅವರು 'ದಿಲ್‌ದಾರ್' ಸಿನಿಮಾದಲ್ಲಿ ಅಭಿನಯಿಸಿದ್ದಾರೆ. ಈ ಸಿನಿಮಾದ ಫಸ್ಟ್ ಲುಕ್ ಟೀಸರ್ ಬಿಡುಗಡೆ ಮಾಡಲಾಗಿದೆ. ಈ ಸಿನಿಮಾಗೆ ಅರ್ಜುನ್ ಜನ್ಯ ಅವರು ಸಂಗೀತ ನೀಡುತ್ತಿದ್ದಾರೆ.

ಇದು ಪಕ್ಕಾ ಮಾಸ್ ಸಿನಿಮಾ: ಮಧು ಗೌಡ ಗಂಗೂರ್ ಅವರು 'ದಿಲ್‌ದಾರ್' ಸಿನಿಮಾಗೆ ನಿರ್ದೇಶನ ಮಾಡುತ್ತಿದ್ದಾರೆ. 'ಡಿ ಬೀಟ್ಸ್ ಮ್ಯೂಸಿಕ್ ವರ್ಲ್ಡ್' ಮೂಲಕ ಈ ಸಿನಿಮಾದ ಫಸ್ಟ್ ಲುಕ್ ಟೀಸರ್ ಬಿಡುಗಡೆ ಆಗಿದೆ. 'ದಿಲ್‌ದಾರ್' ಎಂಬ ಶೀರ್ಷಿಕೆಗೆ 'ಒನ್ ಮ್ಯಾನ್ ಆರ್ಮಿ' ಎಂಬ ಟ್ಯಾಗ್ ಲೈನ್ ಇದೆ. ಆ ಮೂಲಕ ಇದು ಪಕ್ಕಾ ಮಾಸ್ ಸಿನಿಮಾ ಎಂಬುದನ್ನು ಸೂಚಿಸಲಾಗಿದೆ. ಇದನ್ನು ನೋಡಿದರೆ ಕಥಾವಸ್ತು ಬಗ್ಗೆ ಕೌತುಕ ಮೂಡುತ್ತದೆ.

ಪ್ರೇಕ್ಷಕರಿಂದ ಪಾಸಿಟಿವ್ ಕಮೆಂಟ್ಸ್: ಈ ಮೊದಲಿನ ಸಿನಿಮಾಗಳಲ್ಲಿ ಕೂಡ ಶ್ರೇಯಸ್ ಮಂಜು ಅವರು ಮಾಸ್ ಪಾತ್ರಗಳನ್ನು ಮಾಡಿದ್ದರು. ಆದರೆ ಈಗ 'ದಿಲ್‌ದಾರ್' ಸಿನಿಮಾದಲ್ಲಿ ಮತ್ತೊಂದು ಹಂತಕ್ಕೆ ಅವರು ಏರಿದಂತಿದೆ. ಮಾಸ್ ಗೆಟಪ್ ಮಾತ್ರವಲ್ಲದೇ ಮಾಸ್ ಡೈಲಾಗ್ ಕೂಡ ಈ ಟೀಸರ್‌ನಲ್ಲಿದೆ. ಟೀಸರ್ ನೋಡಿದ ಪ್ರೇಕ್ಷಕರಿಂದ ಪಾಸಿಟಿವ್ ಕಮೆಂಟ್‌ಗಳು ಬರುತ್ತಿವೆ. ಸದ್ಯಕ್ಕೆ ಕಥೆಯ ಬಗ್ಗೆ ಚಿತ್ರತಂಡ ಸುಳಿವು ನೀಡಿಲ್ಲ.

'ದಿಲ್‌ದಾರ್' ಸಿನಿಮಾ ಮೇಲೆ ಕೌತುಕ ಹೆಚ್ಚಿಸುವಲ್ಲಿ ಈ ಫಸ್ಟ್ ಲುಕ್ ಟೀಸರ್ ಯಶಸ್ವಿ ಆಗಿದೆ. 'ಏನ್ಸಿಯಂಟ್ ಮೂವೀಸ್' ಬ್ಯಾನರ್ ಮೂಲಕ ಆರ್. ಸಂತೋಷ್ ಕುಮಾರ್ (ಎಸ್‌ವಿಟಿ) ಅವರು ಈ ಸಿನಿಮಾವನ್ನು ನಿರ್ಮಾಣ ಮಾಡುತ್ತಿದ್ದಾರೆ. ಸದ್ಯಕ್ಕೆ ಈ ಸಿನಿಮಾದ ಚಿತ್ರೀಕರಣ ಮುಕ್ತಾಯ ಆಗಿದೆ. ಸಿನಿಮಾ ಬಿಡುಗಡೆ ಮಾಡಲು ಸಕಲ ಸಿದ್ಧತೆ ಮಾಡಿಕೊಳ್ಳಲಾಗುತ್ತಿದೆ.

ಪಾತ್ರವರ್ಗದಲ್ಲಿ ಯಾರೆಲ್ಲ ಇದ್ದಾರೆ?: ಖ್ಯಾತ ನಟ ಶರಣ್ ಅವರ ತಂಗಿ ಮಗಳಾದ ಕೀರ್ತಿ ಕೃಷ್ಣ ಅವರು 'ದಿಲ್‌ದಾರ್' ಸಿನಿಮಾದ ಮೂಲಕ ನಾಯಕಿಯಾಗಿ ಚಿತ್ರರಂಗಕ್ಕೆ ಕಾಲಿಡುತ್ತಿದ್ದಾರೆ. ಸಾಧು ಕೋಕಿಲ, ಚಂದ್ರಪ್ರಭ, ಚಿಲ್ಲರ್ ಮಂಜು, ಕಾರ್ತಿಕ್, ಆಂಡ್ರೋ ಅವಿನಾಶ್, ಭಜರಂಗಿ ಲೋಕಿ, ಅರ್ಪಿತ್ ಮುಂತಾದವರು ಈ ಸಿನಿಮಾದ ಪಾತ್ರವರ್ಗದಲ್ಲಿ ಇದ್ದಾರೆ. ಹರೀಕೃಷ್ಣ ರೆಡ್ಡಿ ಎಸ್. ಅವರು ಈ ಚಿತ್ರಕ್ಕೆ ಕಾರ್ಯಕಾರಿ ನಿರ್ಮಾಪಕರಾಗಿ ಕೆಲಸ ಮಾಡುತ್ತಿದ್ದಾರೆ.

## ವರದಕ್ಷಿಣೆ ಸಮಾಜದ ಅಭಿವೃದ್ಧಿಗೆ ಮಾರಕ: ರಾಮಶೆಟ್ಟಿ ಪವಾರ್



**ಚಿಂಚೋಳಿ:** ಬಂಜಾರ ಸಮಾಜದಲ್ಲಿ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿರುವ ವರದಕ್ಷಿಣೆ ಪದ್ಧತಿಯು ಸಾಮಾಜಿಕ ಪಿಡುಗಾಗಿ ಪರಿಣಮಿಸಿದ್ದು, ಈ ಅನಿಷ್ಠ ಪದ್ಧತಿಯನ್ನು ನಿರ್ಮೂಲನೆ ಮಾಡಲು ಸಮಾಜದಲ್ಲಿ ವ್ಯಾಪಕ ಜಾಗೃತಿ ಮೂಡಿಸುವುದರ ಜೊತೆಗೆ ಸಂಘಟಿತ ಹೋರಾಟ ನಡೆಸುವುದು ಅತ್ಯಗತ್ಯವಾಗಿದೆ ಎಂದು ತಾಲೂಕು ಬಂಜಾರ ಸಮಾಜದ ಅಧ್ಯಕ್ಷ ರಾಮಶೆಟ್ಟಿ ಪವಾರ್ ಹೇಳಿದರು.

ಪಟ್ಟಣದ ಬಂಜಾರ ಭವನದಲ್ಲಿ ಭಾನುವಾರ ಹಮ್ಮಿಕೊಂಡಿದ್ದ ವರದಕ್ಷಿಣೆ ಪಿಡುಗು ನಿರ್ಮೂಲನೆ ಹಾಗೂ ಬಂಜಾರ ಸಂಸ್ಕೃತಿ ಉಳಿಸುವ ಜಾಗೃತಿ ಸಭೆಯಲ್ಲಿ ಅವರು ಮಾತನಾಡಿದರು.

ಗಡಿ ಭಾಗದ ತಾಲೂಕಿನಲ್ಲಿ ಬಂಜಾರ ಸಮಾಜದ ಜನಸಂಖ್ಯೆ ಹೆಚ್ಚಿನ ಪ್ರಮಾಣದಲ್ಲಿದ್ದು, ಸಮಾಜದ ಬಹುತೇಕ ಕುಟುಂಬಗಳು ಇಂದಿಗೂ ಆರ್ಥಿಕ ಸಂಕಷ್ಟದ ನಡುವೆಯೇ ಜೀವನ ಸಾಗಿಸುತ್ತಿವೆ. ಇಂತಹ ಸಂದರ್ಭದಲ್ಲಿ ಮಗಳ ವಿವಾಹಕ್ಕಾಗಿ ವರದಕ್ಷಿಣೆ ನೀಡುವ ಅನಿವಾರ್ಯತೆ ಅನೇಕ ಕುಟುಂಬಗಳ ಮೇಲೆ ಭಾರೀ ಹೊರೆ ಉಂಟುಮಾಡುತ್ತಿದೆ. ಮಕ್ಕಳ ಮದುವೆಗಾಗಿ ಪೋಷಕರು ತಮ್ಮ ಜಮೀನು, ಮನೆ ಹಾಗೂ ಆಸ್ತಿಯನ್ನು ಮಾರಾಟ ಮಾಡುವುದು, ಅಡವಿಡುವುದು ಅಥವಾ ಸಾಲದ ಮೊರೆ ಹೋಗುವುದು ಸಾಮಾನ್ಯವಾಗಿದೆ. ಉದ್ಯೋಗ ಅರಸಿ ಗುಳೆ ಹೋಗುವ ಪರಿಸ್ಥಿತಿಯೂ ನಿರ್ಮಾಣವಾಗುತ್ತಿದೆ ಎಂದು ಅವರು ಆತಂಕ ವ್ಯಕ್ತಪಡಿಸಿದರು.

ವರದಕ್ಷಿಣೆ ಎಂಬ ಸಾಮಾಜಿಕ ಪಿಡುಗು ಸಮಾಜದ ಅಭಿವೃದ್ಧಿಗೆ ಅಡ್ಡಿಯಾಗಿದ್ದು, ಇದನ್ನು ತೊಡೆದುಹಾಕಲು ಶ್ರೀಮಂತರು ಮತ್ತು ಬಡವರು ಎಂಬ ಭೇದಭಾವವಿಲ್ಲದೆ ಎಲ್ಲರೂ ಒಗ್ಗೂಡಿ ಕಾರ್ಯನಿರ್ವಹಿಸಬೇಕು. ಸರಳ ವಿವಾಹಗಳಿಗೆ ಉತ್ತೇಜನ ನೀಡುವುದರ ಮೂಲಕ ಯುವ ಪೀಳಿಗೆಗೆ ಉತ್ತಮ ಸಂದೇಶ ನೀಡಬೇಕು. ಸಮಾಜದ ಪ್ರತಿಯೊಬ್ಬರೂ ವರದಕ್ಷಿಣೆ ಪಡೆಯುವುದಿಲ್ಲ, ನೀಡುವುದಿಲ್ಲ ಎಂಬ ಸಂಕಲ್ಪ ಮಾಡಿದಾಗ ಮಾತ್ರ ಈ ಅನಿಷ್ಠ ಪದ್ಧತಿಯನ್ನು ನಿರ್ಮೂಲನೆ ಮಾಡಲು ಸಾಧ್ಯ ಎಂದು ಕರೆ ನೀಡಿದರು.

ಸಭೆಯಲ್ಲಿ ಮಾತನಾಡಿದ ಮುಖಂಡರು, ಬಂಜಾರ ಸಮಾಜದ ಸಂಸ್ಕೃತಿ, ಪರಂಪರೆ ಮತ್ತು ಸಾಮಾಜಿಕ ಮೌಲ್ಯಗಳನ್ನು ಉಳಿಸುವ ಜವಾಬ್ದಾರಿ ಪ್ರತಿಯೊಬ್ಬರ ಮೇಲಿದೆ ಎಂದು ಅಭಿಪ್ರಾಯಪಟ್ಟರು. ಶಿಕ್ಷಣ, ಸಂಘಟನೆ ಮತ್ತು ಜಾಗೃತಿಯ ಮೂಲಕ ಸಮಾಜವನ್ನು ಮತ್ತಷ್ಟು ಸದೃಢಗೊಳಿಸುವ ಅಗತ್ಯವಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಸಮಾಜದ ಪ್ರಮುಖರಾದ ನಾರಾಯಣ ರಾಠೋಡ್, ಮೋಹನ ಪೋಲಕಪಳ್ಳಿ, ಮೋಹನ ಪವಾರ್, ಕಿಶನ್ ಕುಸರಂಪಳ್ಳಿ, ಯಮರಾಜ, ಮೋಹನ್ ಮಾಸ್ಟರ್, ದಿಲೀಪಕುಮಾರ, ಗೋವಿಂದ ನಾಯಕ್, ರಮೇಶ ಚಿಕ್ಕನಿಂಗದಳ್ಳಿ, ನೀಲಕಂಠ, ಬನ್ಸಿಲಾಲ್, ಓಮನಾಥ ಜಾಧವ್, ದೇಸು ಪವಾರ್, ಜಗನ್ನಾಥ ಅಗಸಲಣಿ ಸೇರಿದಂತೆ ಅನೇಕ ಮುಖಂಡರು ಹಾಗೂ ಸಮಾಜದ ಸದಸ್ಯರು ಭಾಗವಹಿಸಿದ್ದರು.

ವರದಕ್ಷಿಣೆ ಪಿಡುಗು ನಿರ್ಮೂಲನೆ ಸಮಿತಿ ರಚನೆ: ಬಂಜಾರ ಸಮಾಜದಲ್ಲಿ ವರದಕ್ಷಿಣೆ ಪಿಡುಗು ನಿರ್ಮೂಲನೆ, ಸಾಮಾಜಿಕ ಸಮಸ್ಯೆಗಳ ಬಗ್ಗೆ ಜಾಗೃತಿ ಮೂಡಿಸುವುದು ಹಾಗೂ ಸಮಾಜದಲ್ಲಿ ಸುಧಾರಣಾ ಕಾರ್ಯಕ್ರಮಗಳನ್ನು ಕೈಗೊಳ್ಳುವ ಉದ್ದೇಶದಿಂದ ವರದಕ್ಷಿಣೆ ಪಿಡುಗು ನಿರ್ಮೂಲನೆ ಸಮಿತಿಯನ್ನು ಸಭೆಯಲ್ಲಿ ರಚಿಸಲಾಯಿತು.

ಸಮಿತಿಯ ಅಧ್ಯಕ್ಷರಾಗಿ ಬಲಭೀಮ ನಾಯಕ, ಉಪಾಧ್ಯಕ್ಷರಾಗಿ ರವಿ ರಾಠೋಡ್ ಹಾಗೂ ಗುರುನಾಥ ಮಾಸ್ಟರ್, ಕಾರ್ಯದರ್ಶಿಯಾಗಿ ತುಕಾರಾಮ ಟಿ.ಪಿ.ಎಸ್., ಖಜಾಂಚಿಯಾಗಿ ಗೋಪಾಲದೇವ ಜಾಧವ್ ಹಾಗೂ ಗೌರವಾಧ್ಯಕ್ಷರಾಗಿ ರಾಮಶೆಟ್ಟಿ ಮಾಸ್ಟರ್ ಅವರನ್ನು ಆಯ್ಕೆ ಮಾಡಲಾಯಿತು.

ಅಲ್ಲದೆ ಮೇರಾಜ ರಾಠೋಡ್, ಮೋತಿ-ರಾಮ ನಾಯಕ, ರಾಮಶೆಟ್ಟಿ ಪವಾರ್, ಬಾಬುರಾವ ಸಿಆರ್‌ಪಿ, ಹೀರಾಸಿಂಗ್ ರಾಠೋಡ್, ಅಶೋಕ ಚವ್ಹಾಣ್, ಪ್ರೇಮಸಿಂಗ್ ಜಾಧವ್, ರಾಜು ಪವಾರ್, ದಶರಥ ರಾಠೋಡ್, ವಿಠಲ್ ಕಾರಬಾರಿ, ಡಾ. ತುಕಾರಾಮ ಪವಾರ್, ಚಂದರ ಕಾರಬಾರಿ, ಚಂದು ದಳಪತಿ, ಪ್ರಭು ನಾಯಕ ಹಾಗೂ ಭೀಮಶೆಟ್ಟಿ ಚವ್ಹಾಣ್ ಅವರನ್ನು ಮಾರ್ಗದರ್ಶನ ಮಂಡಳಿಯ ಸದಸ್ಯರನ್ನಾಗಿ ನೇಮಕ ಮಾಡಲಾಯಿತು.

ಸಭೆಯ ಕೊನೆಯಲ್ಲಿ ಸಮಾಜದಲ್ಲಿ ವರದಕ್ಷಿಣೆ ಮುಕ್ತ ವಾತಾವರಣ ನಿರ್ಮಿಸಲು ಹಳ್ಳಿ-ಹಳ್ಳಿಯಲ್ಲಿ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದು, ಸರಳ ವಿವಾಹಗಳಿಗೆ ಉತ್ತೇಜನ ನೀಡುವುದು ಹಾಗೂ ಯುವಜನರಲ್ಲಿ ಸಾಮಾಜಿಕ ಹೊಣೆಗಾರಿಕೆ ಮೂಡಿಸುವ ಕಾರ್ಯವನ್ನು ಸಮಿತಿಯ ಮೂಲಕ ನಿರಂತರವಾಗಿ ನಡೆಸಲು ನಿರ್ಧರಿಸಲಾಯಿತು.

## ರಿವರ್ ಕ್ರೂಸ್ ಪ್ರವಾಸೋದ್ಯಮ ಸ್ಥಳ ಪರಿಶೀಲನೆ



**ಬಾಗಲಕೋಟೆ:** ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಸಾಗರಮಾಲಾ ಯೋಜನೆ ಅಡಿಯಲ್ಲಿ ಹೆರಕಲ್‌ನಿಂದ ಆಲಮಟ್ಟಿವರೆಗೆ ರಿವರ್ ಕ್ರೂಸ್ (ನದಿಹಡಗು) ಆಧಾರಿತ ಪ್ರವಾಸೋದ್ಯಮವನ್ನು ಅಭಿವೃದ್ಧಿಪಡಿಸುವ ಉದ್ದೇಶದಿಂದ ಭಾರತ ಸರ್ಕಾರದ ಒಳನಾಡು ಜಲಸಾರಿಗೆ ಪ್ರಾಧಿಕಾರದ ನಿರ್ದೇಶಕ ಮುರುಗೇಶನ್ ಹಾಗೂ ಬಾಗಲಕೋಟೆ ಜಿಲ್ಲಾಧಿಕಾರಿ ಸಂಗಪ್ಪ ಅವರು ಜಂಟಿಯಾಗಿ ಸ್ಥಳ ಪರಿಶೀಲನೆ ನಡೆಸಿದರು. ಯೋಜನೆ ಅನುಷ್ಠಾನಕ್ಕೆ ಅಗತ್ಯವಿರುವ ಮೂಲಸೌಕರ್ಯ, ನದಿಮಾರ್ಗದ ಅನುಕೂಲತೆ ಹಾಗೂ ಪ್ರವಾಸೋದ್ಯಮದ ಸಾಧ್ಯತೆಗಳ ಕುರಿತು ಅಧಿಕಾರಿಗಳು ಸಮಗ್ರ ಪರಿಶೀಲನೆ ನಡೆಸಿದರು.

ಹೆರಕಲ್ ಬ್ರಿಡ್ಜ್ ಕಂ ಬ್ಯಾರೇಜ್‌ಗೆ ಭೇಟಿ ನೀಡಿದ ಅಧಿಕಾರಿಗಳ ತಂಡ, ಹೆರಕಲ್‌ನಿಂದ ಆಲಮಟ್ಟಿವರೆಗೆ ರಿವರ್ ಕ್ರೂಸ್ ಯೋಜನೆಗೆ ಗುರುತಿಸಲಾದ ಸ್ಥಳಗಳನ್ನು ವೀಕ್ಷಿಸಿ, ಪ್ರವಾಸಿಗರಿಗೆ ಅಗತ್ಯವಾಗುವ ವಿವಿಧ ಸೌಲಭ್ಯಗಳ ಕುರಿತು ಅಧಿಕಾರಿಗಳೊಂದಿಗೆ ಚರ್ಚಿಸಿತು.

ಯೋಜನೆಯಡಿ ನಿರ್ಮಿಸಲಾಗುವ ಜೆಟ್ಟಿ (ಹಡಗು ನಿಲುಗಡೆ ಕೇಂದ್ರ), ಪ್ರವೇಶ ರಸ್ತೆ, ವಾಹನ ನಿಲುಗಡೆ ವ್ಯವಸ್ಥೆ, ಪ್ರವಾಸಿಗರ ನಿರೀಕ್ಷಣಾ ಕೊಠಡಿ, ಕುಡಿಯುವ ನೀರಿನ ವ್ಯವಸ್ಥೆ, ವಿದ್ಯುತ್ ಸಂಪರ್ಕ, ಶೌಚಾಲಯ, ಭದ್ರತಾ ವ್ಯವಸ್ಥೆ ಹಾಗೂ ಇತರೆ ಮೂಲಭೂತ ಸೌಲಭ್ಯಗಳನ್ನು ಯಾವ ರೀತಿಯಲ್ಲಿ ಅಭಿವೃದ್ಧಿಪಡಿಸಬೇಕು ಎಂಬ ಬಗ್ಗೆ ಅಧಿಕಾರಿಗಳು ಸ್ಥಳದಲ್ಲೇ ಪರಿಶೀಲನೆ ನಡೆಸಿ ಮಾಹಿತಿ ಸಂಗ್ರಹಿಸಿದರು.

ಇದೇ ವೇಳೆ ಹೆರಕಲ್‌ನಿಂದ ಆಲಮಟ್ಟಿವರೆಗೆ ನದಿಮಾರ್ಗವನ್ನು ಪ್ರವಾಸೋದ್ಯಮಕ್ಕೆ ಬಳಸುವ ಸಾಧ್ಯತೆ, ವರ್ಷಪೂರ್ತಿ ನೀರಿನ ಲಭ್ಯತೆ, ಪ್ರವಾಸಿಗರಿಗೆ ಸುರಕ್ಷಿತ ಜಲಸಂಚಾರ ಕಲ್ಪಿಸುವ ಕ್ರಮಗಳು ಹಾಗೂ ಮಾರ್ಗದುದ್ದಕ್ಕೂ ಇರುವ ನೈಸರ್ಗಿಕ ಮತ್ತು ಐತಿಹಾಸಿಕ ಪ್ರವಾಸಿ ತಾಣಗಳನ್ನು ರಿವರ್ ಕ್ರೂಸ್ ಯೋಜನೆಯೊಂದಿಗೆ ಸಂಪರ್ಕಿಸುವ ಕುರಿತು ತಾಂತ್ರಿಕ ಚರ್ಚೆ ನಡೆಸಲಾಯಿತು.

ಆಲಮಟ್ಟಿ ಕೆಬಿಜೆಎನ್‌ಎಲ್‌ನ ಕಾರ್ಯನಿರ್ವಾಹಕ ಅಭಿಯಂತರ ವಿಶ್ವನಾಥ ನೀಲನ್ನವರ ಅವರಿಂದ ನದಿಯ ಆಳ, ನೀರಿನ ಹರಿವು, ಜಲಮಟ್ಟ, ಸುರಕ್ಷತಾ ಕ್ರಮಗಳು ಹಾಗೂ ಯೋಜನೆ ಅನುಷ್ಠಾನಕ್ಕೆ ಸಂಬಂಧಿಸಿದ ತಾಂತ್ರಿಕ ಮಾಹಿತಿಯನ್ನು ಅಧಿಕಾರಿಗಳು ಪಡೆದುಕೊಂಡರು.

ಈ ಸಂದರ್ಭದಲ್ಲಿ ಮಾತನಾಡಿದ ಜಿಲ್ಲಾಧಿಕಾರಿ ಸಂಗಪ್ಪ, ಸಾಗರಮಾಲಾ ಯೋಜನೆಯಡಿ ಕೈಗೆತ್ತಿಕೊಳ್ಳಲಾಗುತ್ತಿರುವ ಈ ರಿವರ್ ಕ್ರೂಸ್ ಯೋಜನೆಯಿಂದ ಬಾಗಲಕೋಟೆ ಜಿಲ್ಲೆಯ ಪ್ರವಾಸೋದ್ಯಮ ಕ್ಷೇತ್ರಕ್ಕೆ ಹೊಸ ಆಯಾಮ ದೊರೆಯಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

"ಈ ಯೋಜನೆಯು ಕೇವಲ ಪ್ರವಾಸೋದ್ಯಮ ಅಭಿವೃದ್ಧಿಗೆ ಮಾತ್ರ ಸೀಮಿತವಾಗದೆ, ಸ್ಥಳೀಯ ಯುವಕರಿಗೆ ಉದ್ಯೋಗಾವಕಾಶಗಳನ್ನು ಸೃಷ್ಟಿಸುವುದರ ಜೊತೆಗೆ ಜಲಸಾರಿಗೆ ಆಧಾರಿತ ಪ್ರವಾಸೋದ್ಯಮಕ್ಕೆ ಉತ್ತೇಜನ ನೀಡಲಿದೆ. ಜಿಲ್ಲೆಯ ನೈಸರ್ಗಿಕ ಸೌಂದರ್ಯ, ಐತಿಹಾಸಿಕ ಹಾಗೂ ಧಾರ್ಮಿಕ ತಾಣಗಳನ್ನು ದೇಶ-ವಿದೇಶದ ಪ್ರವಾಸಿಗರಿಗೆ ಪರಿಚಯಿಸಲು ಇದು ಉತ್ತಮ ವೇದಿಕೆಯಾಗಲಿದೆ," ಎಂದು ಹೇಳಿದರು.

ಅಲ್ಲದೆ, ಜಂಗಲ್ ಲಾಡ್ಜಸ್ ಮಾದರಿಯಲ್ಲಿ ಪರಿಸರ ಸ್ನೇಹಿ ವಾಸ್ತವ್ಯ ವ್ಯವಸ್ಥೆಗಳನ್ನು ಅಭಿವೃದ್ಧಿಪಡಿಸುವ ಮೂಲಕ ಪರಿಸರಕ್ಕೆ ಯಾವುದೇ ಹಾನಿಯಾಗದಂತೆ ಪ್ರವಾಸೋದ್ಯಮವನ್ನು ರೂಪಿಸುವ ಅಗತ್ಯವಿದೆ ಎಂದು ಜಿಲ್ಲಾಧಿಕಾರಿ ತಿಳಿಸಿದರು. ಜೀವ ವೈವಿಧ್ಯ ಸಂರಕ್ಷಣೆಗೆ ಆದ್ಯತೆ ನೀಡುತ್ತಾ ಪರಿಸರ ಸ್ನೇಹಿ ಪ್ರವಾಸೋದ್ಯಮಕ್ಕೆ ಉತ್ತೇಜನ ನೀಡುವ ನಿಟ್ಟಿನಲ್ಲಿ ಯೋಜನೆಯನ್ನು ಅನುಷ್ಠಾನಗೊಳಿಸಲಾಗುವುದು ಎಂದು ಹೇಳಿದರು.

ಸ್ಥಳೀಯ ಸಮುದಾಯದ ಆರ್ಥಿಕ ಅಭಿವೃದ್ಧಿಗೂ ಈ ಯೋಜನೆ ಪೂರಕವಾಗಲಿದ್ದು, ಗ್ರಾಮೀಣ ಯುವಕರಿಗೆ ಪ್ರವಾಸ ಮಾರ್ಗದರ್ಶಕರಾಗಿ, ದೋಣಿ ನಿರ್ವಹಣೆ, ಆತಿಥ್ಯ ಸೇವೆ ಹಾಗೂ ಇತರೆ ಪ್ರವಾಸೋದ್ಯಮ ಸಂಬಂಧಿತ ಕ್ಷೇತ್ರಗಳಲ್ಲಿ ತರಬೇತಿ ನೀಡಿ ಉದ್ಯೋಗಾವಕಾಶ ಕಲ್ಪಿಸುವ ಉದ್ದೇಶವಿದೆ ಎಂದು ತಿಳಿಸಿದರು.

ಇದೇ ವೇಳೆ ಮಹಿಳಾ ಸ್ವಸಹಾಯ ಸಂಘಗಳ ಮೂಲಕ ಸ್ಥಳೀಯ ಆಹಾರ ಪದಾರ್ಥಗಳು, ಕರಕುಶಲ ವಸ್ತುಗಳು ಹಾಗೂ ಸಾಂಪ್ರದಾಯಿಕ ಉತ್ಪನ್ನಗಳ ಮಾರಾಟಕ್ಕೆ ಅವಕಾಶ ಕಲ್ಪಿಸಿ, ಸ್ಥಳೀಯ ಆರ್ಥಿಕ ಚಟುವಟಿಕೆಗಳಿಗೆ ಉತ್ತೇಜನ ನೀಡುವ ಯೋಜನೆಯೂ ರೂಪಿಸಲಾಗಿದೆ ಎಂದು ಜಿಲ್ಲಾಧಿಕಾರಿ ಮಾಹಿತಿ ನೀಡಿದರು.

ಯೋಜನೆ ಅನುಷ್ಠಾನಗೊಂಡ ಬಳಿಕ ಹೆರಕಲ್‌ನಿಂದ ಆಲಮಟ್ಟಿವರೆಗೆ ನದಿಮಾರ್ಗದ ಮೂಲಕ ಸುರಕ್ಷಿತ ಹಾಗೂ ಆಕರ್ಷಕ ಪ್ರವಾಸ ವ್ಯವಸ್ಥೆ ರೂಪುಗೊಳ್ಳಲಿದ್ದು, ರಾಜ್ಯದ ಪ್ರಮುಖ ಜಲ ಪ್ರವಾಸೋದ್ಯಮ ತಾಣವಾಗಿ ಈ ಪ್ರದೇಶ ಬೆಳೆಯುವ ನಿರೀಕ್ಷೆ ವ್ಯಕ್ತವಾಗಿದೆ.

ಸ್ಥಳ ಪರಿಶೀಲನೆ ಸಂದರ್ಭದಲ್ಲಿ ಬೀಳಗಿ ತಹಶೀಲ್ದಾರ ವಿನೋದ ಹತ್ತಳ್ಳಿ, ಆಲಮಟ್ಟಿ ಕೆಬಿಜೆಎನ್‌ಎಲ್‌ನ ಸಹಾಯಕ ಅಭಿಯಂತರ ಮಹಾಂತೇಶ ಕನಬೂರ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕಿ ರೇಣುಕಾ ಎಂ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದು, ಯೋಜನೆಯ ಅನುಷ್ಠಾನಕ್ಕೆ ಸಂಬಂಧಿಸಿದ ಮಾಹಿತಿ ಹಾಗೂ ತಾಂತ್ರಿಕ ವಿವರಗಳನ್ನು ಅಧಿಕಾರಿಗಳ ತಂಡಕ್ಕೆ ಒದಗಿಸಿದರು.

ಒಟ್ಟಾರೆಯಾಗಿ, ಸಾಗರಮಾಲಾ ಯೋಜನೆಯಡಿ ಹೆರಕಲ್‌ನಿಂದ ಆಲಮಟ್ಟಿವರೆಗೆ ರಿವರ್ ಕ್ರೂಸ್ ಪ್ರವಾಸೋದ್ಯಮ ಅಭಿವೃದ್ಧಿ ಯೋಜನೆ ಜಾರಿಯಾದರೆ ಬಾಗಲಕೋಟೆ ಜಿಲ್ಲೆಯ ಪ್ರವಾಸೋದ್ಯಮಕ್ಕೆ ಹೊಸ ಉತ್ತೇಜನ ದೊರೆಯುವ ನಿರೀಕ್ಷೆಯಿದೆ. ಜಲಸಾರಿಗೆ ಆಧಾರಿತ ಪ್ರವಾಸೋದ್ಯಮದ ಮೂಲಕ ಸ್ಥಳೀಯರಿಗೆ ಉದ್ಯೋಗಾವಕಾಶಗಳು ಹೆಚ್ಚುವುದರ ಜೊತೆಗೆ ಪರಿಸರ ಸ್ನೇಹಿ ಪ್ರವಾಸ ವ್ಯವಸ್ಥೆ, ಸ್ಥಳೀಯ ಉತ್ಪನ್ನಗಳಿಗೆ ಮಾರುಕಟ್ಟೆ ಹಾಗೂ ಜಿಲ್ಲೆಯ ಆರ್ಥಿಕ ಅಭಿವೃದ್ಧಿಗೂ ಯೋಜನೆ ಸಹಕಾರಿಯಾಗಲಿದೆ ಎಂಬ ವಿಶ್ವಾಸವನ್ನು ಅಧಿಕಾರಿಗಳು ವ್ಯಕ್ತಪಡಿಸಿದರು.

## ಸೆನ್ಸಾರ್ ಕಟ್ ಇಲ್ಲದೆ 'ಜನ ನಾಯಗನ್' ಸಿನಿಮಾ ನೋಡಲು ವಿಜಯ್ ಅಭಿಮಾನಿಗಳಿಗೆ ಸುವರ್ಣಾವಕಾಶ





ತಮಿಳುನಾಡು ಮುಖ್ಯಮಂತ್ರಿ ಹಾಗೂ ಸ್ಟಾರ್ ನಟ ವಿಜಯ್ ಅವರ ಕೊನೆಯ ಸಿನಿಮಾ 'ಜನ ನಾಯಗನ್' ಬಿಡುಗಡೆಗೆ ಸಜ್ಜಾಗಿದೆ. ಸೆನ್ಸಾರ್ ಮಂಡಳಿ ಈ ಚಿತ್ರಕ್ಕೆ 'ಎ' ಪ್ರಮಾಣಪತ್ರ ನೀಡಿದೆ. ಸುಮಾರು 7 ತಿಂಗಳ ವಿಳಂಬದ ನಂತರ ಸಿನಿಮಾ ಥಿಯೇಟರ್‌ಗೆ ಬರುತ್ತಿದೆ. ಭಾರತದಲ್ಲಿ ರಿಲೀಸ್ ಆಗುವ ಸಿನಿಮಾಗೆ ಸೆನ್ಸಾರ್ ಮಂಡಳಿ ಹಲವು ಕಟ್‌ಗಳನ್ನು ಮಾಡಿದೆ. ಆದರೆ ವಿದೇಶಗಳಲ್ಲಿ ಯಾವುದೇ ಕಟ್ ಇಲ್ಲದೆ ಒರಿಜಿನಲ್ ಸಿನಿಮಾ ಬಿಡುಗಡೆಯಾಗುತ್ತಿದೆ. ವಿದೇಶದಲ್ಲಿರುವ ವಿಜಯ್ ಅಭಿಮಾನಿಗಳು ಚಿತ್ರದ ರಾ ಮತ್ತು ಅನ್‌ಕಟ್ ವರ್ಷನ್ ನೋಡಬಹುದು.

**ವಿದೇಶಿ ವಿತರಕರಿಂದ ಅಧಿಕೃತ ಪ್ರಕಟಣೆ:** ಯುಕೆಯಲ್ಲಿ ಈ ಚಿತ್ರವನ್ನು 'ಅಹಿಂಸಾ ಎಂಟರ್‌ಟೈನ್‌ಮೆಂಟ್' ಸಂಸ್ಥೆ ವಿತರಣೆ ಮಾಡುತ್ತಿದೆ. ಜುಲೈ 24 ರಂದು ಯುಕೆಯಲ್ಲಿ ಸಿನಿಮಾ ರಿಲೀಸ್ ಆಗಲಿದೆ ಎಂದು ವಿತರಕರು ಎಕ್ಸ್ ಖಾತೆಯಲ್ಲಿ ತಿಳಿಸಿದ್ದಾರೆ. ಅಲ್ಲಿ ಈ ಚಿತ್ರಕ್ಕೆ 15+ ರೇಟಿಂಗ್ ಸಿಕ್ಕಿದೆ. ಯಾವುದೇ ಸೀನ್ ಅಥವಾ ಡೈಲಾಗ್‌ಗೆ ಕತ್ತರಿ ಹಾಕಲಾಗಿಲ್ಲ. ವಿಜಯ್ ಅವರ ಮಾಸ್ ಆಕ್ಷನ್ ಇಡೀ ಸಿನಿಮಾವನ್ನು ಒರಿಜಿನಲ್ ಆಗಿಯೇ ನೋಡಬಹುದು ಎಂದು ವಿತರಕರು ಬರೆದುಕೊಂಡಿದ್ದಾರೆ.

ಭಾರತದ ವರ್ಷನ್‌ನಲ್ಲಿ ಆದ ಪ್ರಮುಖ ಬದಲಾವಣೆಗಳು: ಈ ಸಿನಿಮಾದಲ್ಲಿ ವಿಜಯ್ ಅವರ ಪಾತ್ರದ ಹೆಸರು 'ದಳಪತಿ ವೆಟ್ರಿ ಕೊಂಡಾನ್'. ಇದರ ಮೊದಲ ಅಕ್ಷರಗಳನ್ನು ಸೇರಿಸಿದರೆ 'ಟಿವಿಕೆ' ಎಂದಾಗುತ್ತದೆ. ಇದು ವಿಜಯ್ ಅವರ ರಾಜಕೀಯ ಪಕ್ಷದ (ತಮಿಳಗ ವೆಟ್ರಿ ಕಳಗಂ) ಹೆಸರೂ ಹೌದು. ಸಿನಿಮಾದಲ್ಲಿದ್ದ 'ಅಂಬೇಡ್ಕರ್ ಸಟುಮ್_ ಟು_ ಟಿವಿಕೆ ಸಟುಮ್' ಎಂಬ ಡೈಲಾಗ್ ಅನ್ನು ಸೆನ್ಸಾರ್ ಮಂಡಳಿ ತೆಗೆದುಹಾಕಿದೆ. ಆಡಿಯೋ ಮತ್ತು ವಿಡಿಯೋ ಎರಡರಲ್ಲೂ ಈ ಬದಲಾವಣೆ ಮಾಡಲಾಗಿದೆ.

ಸೆನ್ಸಾರ್ ಕತ್ತರಿಗೆ ಸಿಲುಕಿದ ಇತರ ದೃಶ್ಯಗಳು: ಸಿನಿಮಾದಲ್ಲಿ ಬರುವ 'ಓಂ' ಮತ್ತು 'ನ್ಯೂ ಇಂಡಿಯಾ' ಎಂಬ ಪದಗಳನ್ನು ಮ್ಯೂಟ್ ಮಾಡಲಾಗಿದೆ. ಸದ್ದಾಂ ಹುಸೇನ್ ಗಲ್ಲು ಶಿಕ್ಷೆಗೆ ಸಂಬಂಧಿಸಿದ ಡೈಲಾಗ್‌ಗಳನ್ನು ಬದಲಾಯಿಸಲಾಗಿದೆ. ಪೊಲೀಸ್ ಅಧಿಕಾರಿಯ ಬ್ಯಾಡ್ಜ್‌ಗೆ ಗೌರವ ನೀಡದ ದೃಶ್ಯವನ್ನು ತೆಗೆಯಲಾಗಿದೆ. 'ಭಾಗವತಂ' ಮತ್ತು 'ರಂಗನಾಥರ್' ಎಂಬ ಪದಗಳನ್ನು ಕೂಡ ಸೈಲೆನ್ಸ್ ಮಾಡಲಾಗಿದೆ. ಕೆಲವು ಅಶ್ಲೀಲ ಬೈಗುಳದ ಪದಗಳನ್ನು ಮ್ಯೂಟ್ ಮಾಡಲಾಗಿದೆ. ಮಗುವನ್ನು ಸುಡುವ ದೃಶ್ಯ ಮತ್ತು ಭಾರತದ ರಾಷ್ಟ್ರಧ್ವಜ ನೆಲಕ್ಕೆ ಬೀಳುವ ದೃಶ್ಯಗಳನ್ನು ಸಂಪೂರ್ಣವಾಗಿ ತೆಗೆದುಹಾಕಲಾಗಿದೆ.